# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಎಸ್.ಎಲ್.ಧರ್ಮೇಗೌಡ, |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 209 |
| ಉತ್ತರಿಸುವ ಸಚಿವರು | : | ಮಾನ್ಯ ಕೃಷಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 10-12-2018 |

| ಕ್ರಸಂ. | ವಿಷಯ | ಉತ್ತರ |
|---|---|---|
| ಅ) | ಕೃಷಿ ಇಲಾಖೆಯ ಕ್ಷೇತ್ರ ಮಟ್ಟದಲ್ಲಿ ಇಲಾಖಾ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲು ಕೃಷಿ ಸಹಾಯಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಹಾಗಿದ್ದಲ್ಲಿ, ಕೃಷಿ ಸಹಾಯಕರ ನೇಮಕಾತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕೃಷಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸಮಗ್ರ ತಿದ್ದುಪಡಿ ಮಾಡುವ ಕುರಿತು ಪರಿಶೀಲಿಸಲಾಗುತ್ತಿದ್ದು, ಕೃಷಿ ಸಹಾಯಕರ ಹುದ್ದೆಗಳನ್ನು ಪುನರ್ ಸೃಜಿಸುವ ಬಗ್ಗೆಯೂ ಸಹ ಪರಿಶೀಲಿಸಲಾಗುತ್ತಿದೆ. |
| ಇ) | ಕೃಷಿ ಸಹಾಯಕರ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆ ಏನು; ಕೃಷಿ ಡಿಪ್ಲೋಮಾ ಮಾಡಿರುವ ನಿರುದ್ಯೋಗಿಗಳಿಗೆ ಕೃಷಿ ಸಹಾಯಕರ ಹುದ್ದೆಗೆ ನೇಮಕ ಮಾಡಿಕೊಳ್ಳುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ; | ಕೃಷಿ ಸಹಾಯಕರ ಹುದ್ದೆಯ ನೇಮಕಾತಿಗೆ ಕನಿಷ್ಠ ವಿದ್ಯಾರ್ಹತೆಯಾಗಿ ಪಿ.ಯು.ಸಿ (ಪಿ.ಸಿ.ಎಂ.ಬಿ) ಅಥವಾ ಡಿಪ್ಲೊಮಾ (ಕೃಷಿ) ವಿದ್ಯಾರ್ಹತೆಯನ್ನು ನಿಗಧಿಪಡಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |
| ಈ) | ಖಾಯಂ ಕೃಷಿ ಸಹಾಯಕರನ್ನು ಯಾವಾಗ ನೇಮಕ ಮಾಡಿಕೊಳ್ಳಲಾಗಿತ್ತು; ಇಲ್ಲಿಯವರೆಗೆ ನೇಮಕ ಮಾಡಿಕೊಳ್ಳದಿರಲು ಕಾರಣವೇನು; | 1988-89ರಲ್ಲಿ 1050 ಕೃಷಿ ಸಹಾಯಕರನ್ನು ನೇಮಕ ಮಾಡಿಕೊಳ್ಳಲಾಗಿರುತ್ತದೆ.<br>ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮ ಸಂ:ಡಿಪಿಎಆರ್ 32 ಎಸ್ಆರ್ಇ 98, ದಿ:01.01.2000ರನ್ವಯ ಕೃಷಿ ಸಹಾಯಕರ ಹುದ್ದೆಗಳನ್ನು ನಶಿಸಿಹೋಗುವ ಹುದ್ದೆಗಳೆಂದು ಪರಿಗಣಿಸಿರುವುದರಿಂದ ನೇಮಕಾತಿ ಮಾಡಿರುವುದಿಲ್ಲ. |
| ಉ) | ಹೊರಗುತ್ತಿಗೆ ಆಧಾರದ ಮೇಲೆ ಕೃಷಿ ಅನುವುಗಾರರಾಗಿ ಹಾಗೂ ರೈತ ಸಂಪರ್ಕ ಕೇಂದ್ರದ ಅಕೌಂಟೆಂಟ್ ಹುದ್ದೆಗಳಿಗೆ ನೇಮಕಾತಿ ಮಾಡಿಕೊಂಡಿರುವುದರಿಂದ | ಭೂಚೇತನ ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕಾಗಿ 2009-10 ರಿಂದ 2016 ರವರೆಗೆ ರೈತ ಅನುವುಗಾರರ ಸೇವೆಯನ್ನು ರೈತರಿಗೆ ತಾಂತ್ರಿಕತೆಗಳನ್ನು ತಲುಪಿಸಲು ಪಡೆಯಲಾಗಿದ್ದು, ಈ |

| | | |
|---|---|---|
| | ಇಲಾಖೆಯ ಮಹತ್ವದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವಲ್ಲಿ ಅನುಕೂಲವಾಗಿದೆಯೇ; ಹಾಗಿದ್ದಲ್ಲಿ ಯಾವ ರೀತಿ ಅನುಕೂಲವಾಗಿದೆ? (ವಿವರ ನೀಡುವುದು) | ಯೋಜನೆಯ ಅನುಷ್ಠಾನಕ್ಕೆ ಅನುಕೂಲವಾಗಿರುತ್ತದೆ. ತದನಂತರ ತಾಂತ್ರಿಕ ಉತ್ತೇಜಕರಾಗಿ (ಮೊದಲಿನ ರೈತ ಅನುವುಗಾರರು) ಇವರ ಸೇವೆಯನ್ನು ಇಲಾಖೆಯ ಇತರೆ ವಿವಿಧ ಯೋಜನೆಗಳ ಅನುಷ್ಠಾನದಲ್ಲಿ ಕೃಷಿ ಇಲಾಖೆಯ ವಿಸ್ತರಣಾ ಅಧಿಕಾರಿಗಳೊಂದಿಗೆ ಬಳಸಿಕೊಳ್ಳಲಾಗಿದೆ. ಮಣ್ಣು ಮಾದರಿ ಸಂಗ್ರಹಣೆ, ಮಣ್ಣು ಆರೋಗ್ಯ ಚೀಟಿ ವಿತರಣೆ, ಪ್ರಾತ್ಯಕ್ಷತೆಗಳ ನಿರ್ವಹಣೆ ಮುಂತಾದವುಗಳನ್ನು ಮಾಡುವುದರಲ್ಲಿ ಸಹಾಯಕವಾಗಿರುತ್ತದೆ.<br><br>ರೈತ ಸಂಪರ್ಕ ಕೇಂದ್ರಗಳಲ್ಲಿ ತಾಂತ್ರಿಕ ಸಿಬ್ಬಂದಿಯು ವಿವಿಧ ವಿಸ್ತರಣೆ ಕಾರ್ಯಗಳು ಹಾಗೂ ಇತರೆ ಸಂಬಂಧಿತ ತಾಂತ್ರಿಕ ಮಾಹಿತಿ ನೀಡಲು ಕ್ಷೇತ್ರ ಭೇಟಿ ಕೈಗೊಳ್ಳುತ್ತಾರೆ. ಅಕೌಂಟೆಂಟ್‌ಗಳು ಕಛೇರಿ ಅವಧಿಯಲ್ಲಿ ರೈತ ಸಂಪರ್ಕ ಕೇಂದ್ರಗಳಲ್ಲಿ ಪೂರ್ಣ ಸಮಯ ಹಾಜರಿದ್ದು ರೈತರಿಗೆ ಇಲಾಖೆಯಲ್ಲಿ ದೊರೆಯುವ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡುವುದರ ಜೊತೆಗೆ ಪ್ರತಿ ದಿನದ ರೈತ ಸಂಪರ್ಕ ಕೇಂದ್ರದ ಲೆಕ್ಕ ಪತ್ರಗಳನ್ನು ನಿರ್ವಹಿಸುತ್ತಿದ್ದಾರೆ. |

ಸಂಖ್ಯೆ: 112 ಕೃವಸೇ 2018

(ಎನ್.ಹೆಚ್.ಶಿವಶಂಕರ ರೆಡ್ಡಿ)
ಕೃಷಿ ಸಚಿವರು